ಸಿಸಿ ನಂ. 132/2023 ಪಿಡಬ್ಲೂ :1

ದಿನಾಂಕಃ 28-12-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಹೆಚ್ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ .

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿದ ಅಧಿಕಾರ ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು . ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ -2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಎರಡು ಅಂಚೆ ರಸೀದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ -5 ಮತ್ತು ನಿಪಿ-6 ಎಂದು ಗುರುತಿಸಲಾಯಿತು. ಎರಡು ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ -7 ಮತ್ತು ನಿಪಿ-8 ಎಂದು ಗುರುತಿಸಲಾಯಿತು. ಸದರಿ ನೋಟಿಸಿಗೆ ಆರೋಪಿಯು ತನ್ನ ವಕೀಲರ ಮುಖಾಂತರ ಕಳುಹಿಸಿದ ಉತ್ತರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

3. ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಅರ್ಜಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಯ ಯಥಾ ನಕಲನ್ನು ನಿಪಿ -10 ಎಂದು ಗುರುತಿಸಲಾಯಿತು . ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರು ಪತ್ರದ ಯಥಾ ನಕಲನ್ನು ನಿಪಿ -11 ಎಂದು ಗುರುತಿಸಲಾಯಿತು . ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ

. ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ನಿಪಿ –12 ಎಂದು ಗುರುತಿಸಲಾಯಿತು . ಮುದ್ದತಿ ವಚನ ಪತ್ರದ ಯುಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಮುದ್ದತಿ ವಚನ ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಮುದ್ದತಿ ವಚನ ಪತ್ರದ ಯಥಾ ನಕಲನ್ನು ನಿಪಿ–13 ಎಂದು ಗುರುತಿಸಲಾಯಿತು . ಹೈಪೊಥಿಕೇಶನ್ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಹೈಪೋಥಿಕೇಶನ್ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಹೈಪೋಥಿಕೇಶನ್ ಕರಾರು ಪತ್ರದ ಯಥಾ ನಕಲನ್ನು ನಿಪಿ –14 ಎಂದು ಗುರುತಿಸಲಾಯಿತು . ಸಾಲದ ಖಾತೆಯ ಉತಾರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ–15 ಎಂದು ಹಾಗೂ ನಿಪಿ–15 ರ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ –16 ಎಂದು ಗುರುತಿಸಲಾಯಿತು. ಠರಾವಿನ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ–17 ಎಂದು ಗುರುತಿಸಲಾಯಿತು.

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.